ಆ) ಬೋಧಕ ಹುದ್ದೆಗಳು .. 04
ಬೋಧಕೇತರ ಹುದ್ದೆಗಳು .. ಖಾಲಿ ಇಲ್ಲ.

ಇ) ಸಂಬಂಧಿಸಿದ ವಿಷಯಗಳಲ್ಲಿನ ಉಪನ್ಯಾಸಕರ ಹುದ್ದೆಗಳನ್ನು ವರ್ಗಾವಣೆ ಅಥವಾ ನೇಮಕಾತಿ ಮೂಲಕ ತುಂಬಲು ಆದಷ್ಟು ಬೇಗ ಕ್ರಮ ಕೈಗೊಳ್ಳಲಾಗುವುದು.

## ಬೆಂಗಳೂರು ನಗರದಲ್ಲಿ ಹೆಪಿಟೈಟೀಸ್ ಬಿವ್ಯಾಕ್ಸೀನ್ ಕ್ಯಾಂಪ್‌ಗಳು

1995 (2207) ಶ್ರೀ ರಾಮಲಿಂಗ ರೆಡ್ಡಿ (ಜಯನಗರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ಬೆಂಗಳೂರು ನಗರದಲ್ಲಿ ಸ್ವಯಂ ಸೇವಾ ಸಂಸ್ಥೆಗಳು ಹಾಗೂ ಖಾಸಗಿ ಸಂಸ್ಥೆಗಳು ಹೆಪಿಟೈಟೀಸ್ 'ಬಿ' ವ್ಯಾಕ್ಸೀನ್ ಬಗ್ಗೆ ಕ್ಯಾಂಪುಗಳನ್ನು ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಆ) ಜನತೆಗೆ ಇದರ ಭೀತಿ ಹುಟ್ಟಿಸಿ ಪ್ರತಿ ಒಂದು ಡೋಸ್ ವ್ಯಾಕ್ಸೀನ್‌ಗೆ 200 ರಿಂದ 300 ರೂ. ಗಳನ್ನು ವಸೂಲು ಮಾಡುತ್ತಿರುವುದು ನಿಜವಲ್ಲವೆ;

ಇ) ಜನತೆಯಲ್ಲಿ ಈ ರೋಗದ ಬಗ್ಗೆ ಭೀತಿ ಹುಟ್ಟಿಸುವುದನ್ನು ತಡೆಗಟ್ಟಲು ಹಾಗೂ ಈ ವ್ಯಾಕ್ಸೀನ್‌ನ್ನು ಸರ್ಕಾರಿ ಆಸ್ಪತ್ರೆಗಳಲ್ಲಿಯೇ ಕಡಿಮೆ ದರದಲ್ಲಿ ನೀಡಲು ಸರ್ಕಾರ ಉದ್ದೇಶಿಸಿದೆಯೇ?

ಡಾ: ಎ.ಬಿ.ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಬಂದಿದೆ.

ಆ) ಭೀತಿ ಹುಟ್ಟಿಸಿರುವ ವಿಷಯ ಗಮನಕ್ಕೆ ಬಂದಿರುವುದಿಲ್ಲ. ಆದರೆ ವಯಸ್ಕರಿಗೆ ಪ್ರತಿ ಡೋಸ್‌ಗೆ 200 ರಿಂದ 300 ರೂ.ಗಳನ್ನು ವಸೂಲು ಮಾಡುತ್ತಿರುವುದು ನಿಜ.

ಇ) ರಾಷ್ಟ್ರೀಯ ರಾಜ್ಯ ಮಟ್ಟದ ರೋಗ ನಿರೋಧಕ ಲಸಿಕೆ ನೀಡುವ ಕಾರ್ಯಕ್ರಮಗಳಲ್ಲಿ ಹೆಪಟೈಟೀಸ್ 'ಬಿ' ವ್ಯಾಕ್ಸೀನ್ ಸೇರಿರುವುದಿಲ್ಲ.

## ರಾಜ್ಯದಲ್ಲಿರುವ ಸರ್ಕಾರಿ ಹಾಗೂ ಖಾಸಗಿ ಆಯುರ್ವೇದ ಮತ್ತು ಹೋಮಿಯೋಪತಿ ಕಾಲೇಜುಗಳು

1996 (2208) ಶ್ರೀ ರಾಮಲಿಂಗ ರೆಡ್ಡಿ (ಜಯನಗರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ರಾಜ್ಯದಲ್ಲಿರುವ ಸರ್ಕಾರಿ ಹಾಗೂ ಖಾಸಗಿ ಆಯುರ್ವೇದ ಮತ್ತು ಹೋಮಿಯೋಪತಿ ಕಾಲೇಜುಗಳ ಸಂಖ್ಯೆ ಎಷ್ಟು;

ಆ) ಹೊಸದಾಗಿ ಆಯುರ್ವೇದ ಹಾಗೂ ಹೋಮಿಯೋಪತಿ ಕಾಲೇಜುಗಳನ್ನು ತೆರೆಯಲು ಇಲ್ಲಿಯವರೆಗೆ ಸರ್ಕಾರಕ್ಕೆ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು;

ಇ) ಹೊಸದಾಗಿ ಈ ಕಾಲೇಜುಗಳನ್ನು ಪ್ರಾರಂಭಿಸಲು ಸರ್ಕಾರ ಏನಾದರೂ ನಿರ್ಬಂಧವನ್ನು ವಿಧಿಸಿದೆಯೆ;

ಈ) ಹಾಗಿದ್ದಲ್ಲಿ ಯಾವಾಗ ಈ ನಿರ್ಬಂಧವನ್ನು ವಿಧಿಸಲಾಗಿದೆ ಹಾಗೂ ಇದಕ್ಕೆ ಕಾರಣಗಳೇನು;

ಉ) ಭಾರತೀಯ ವೈದ್ಯ ಪದ್ಧತಿಯನ್ನು ಜನಪ್ರಿಯಗೊಳಿಸಲು ಸರ್ಕಾರ ಈ ನಿರ್ಬಂಧವನ್ನು ಸಡಿಲಿಸಿ ಅಗತ್ಯವಿರುವ ಕಡೆಗಳಲ್ಲಿ ಈ ಕಾಲೇಜುಗಳನ್ನು ಪ್ರಾರಂಭಿಸಲು ಅನುಮತಿ ನೀಡುವುದೇ?

**ಡಾ: ಎ.ಬಿ.ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :**

ಅ) ರಾಜ್ಯದಲ್ಲಿ 3 ಸರ್ಕಾರಿ ಆಯುರ್ವೇದ ಕಾಲೇಜುಗಳು ಮತ್ತು 40 ಖಾಸಗಿ ಆಯುರ್ವೇದ ಕಾಲೇಜುಗಳು ಇವೆ ಮತ್ತು ಒಂದು ಸರ್ಕಾರಿ ಹೋಮಿಯೋಪತಿ ಕಾಲೇಜು ಹಾಗೂ 14 ಖಾಸಗಿ ಹೋಮಿಯೋಪತಿ ಕಾಲೇಜುಗಳು ಇವೆ.

ಆ) 1999-2000ನೇ ಸಾಲಿನಲ್ಲಿ ಆಯುರ್ವೇದ ಕಾಲೇಜುಗಳನ್ನು ತೆರೆಯುವ ಬಗ್ಗೆ ಎಂಟು ಅರ್ಜಿಗಳು ಮತ್ತು ಹೋಮಿಯೋಪತಿ ಕಾಲೇಜುಗಳನ್ನು ತೆರೆಯುವ ಬಗ್ಗೆ 3 ಅರ್ಜಿಗಳು ಸರ್ಕಾರಕ್ಕೆ ಬಂದಿದೆ.

ಇ) ಹೌದು.

ಈ) ಈಗಾಗಲೇ ರಾಜ್ಯದಲ್ಲಿ ಆಯುರ್ವೇದ ಮತ್ತು ಹೋಮಿಯೋಪತಿ ಮಹಾವಿದ್ಯಾಲಯಗಳು ಹೆಚ್ಚಾಗಿದ್ದು ಹಾಗೂ ಹೆಚ್ಚಿನ ಮಹಾವಿದ್ಯಾಲಯಗಳಲ್ಲಿ ವಿದ್ಯಾರ್ಥಿಗಳ ಪ್ರವೇಶ ಸಂಖ್ಯೆ ಕಡಿಮೆ ಪ್ರಮಾಣದಲ್ಲಿ ಇರುವುದರಿಂದ ದಿನಾಂಕ:16.3.99 ರಿಂದ ಜಾರಿಗೆ ಬರುವಂತೆ 3 ವರ್ಷಗಳ ಕಾಲ ಹೊಸದಾಗಿ ಆಯುರ್ವೇದ ಮತ್ತು ಹೋಮಿಯೋಪತಿ ಮಹಾವಿದ್ಯಾಲಯಗಳನ್ನು ಮಂಜೂರು ಮಾಡುವುದರ ಮೇಲೆ ನಿರ್ಬಂಧವನ್ನು ವಿಧಿಸಿರುತ್ತದೆ.

ಉ) ಸದ್ಯಕ್ಕೆ ಇಂತಹ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.

## ಬೆಂಗಳೂರಿನ ಸಂಜಯಗಾಂಧಿ ಅಪಘಾತ ಮತ್ತು ಪುನರ್ವಸತಿ ಸಂಸ್ಥೆಯಲ್ಲಿ ಮರಣೋತ್ತರ ಪರೀಕ್ಷೆ ನಡೆಸುವುದು

**1997 (2592)** ಶ್ರೀ ರಾಮಲಿಂಗಾ ರೆಡ್ಡಿ (ಜಯನಗರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ಬೆಂಗಳೂರಿನ ಸಂಜಯ್‌ಗಾಂಧಿ ಅಪಘಾತ ಮತ್ತು ಪುನರ್ವಸತಿ ಸಂಸ್ಥೆಯಲ್ಲಿ ಮರಣೋತ್ತರ ಪರೀಕ್ಷೆ ನಡೆಸಲು ಅವಕಾಶವಿದೆಯೆ;

ಆ) ಹಾಗಿದ್ದಲ್ಲಿ, ಮರಣೋತ್ತರ ಪರೀಕ್ಷೆಗಾಗಿ ಬೌರಿಂಗ್ ಅಥವಾ ವಿಕ್ಟೋರಿಯಾ ಆಸ್ಪತ್ರೆಗೆ ಮೃತಪಟ್ಟವರ ದೇಹಗಳನ್ನು ಕಳುಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?